# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಹೆಚ್.ಬಿ.ರವಿಕುಮಾರ್, ಸಹಾಯಕ ಇಂಜಿನಿಯರ್ ಇವರುಗಳು ಕೊಳ್ಳೇಗಾಲ ತಾಲ್ಲೂಕಿನ ಗ್ರಾಮೀಣ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಲ್ಲಿ ಕರ್ತವ್ಯ ನಿರ್ಲಕ್ಷ್ಯತೆ ತೋರಿಸುವ ಕುರಿತು – ಅಮಾನತ್ತು ತೆರವುಗೊಳಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 42 ಇಎನ್‌ಕ್ಯೂ 2015, ದಿನಾಂಕ: 25.05.2015

*****

**ಪ್ರಸ್ತಾವನೆ:-**

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ ರವರ ದಿನಾಂಕ : 13.04.2015ರ ಪತ್ರಗಳಲ್ಲಿ ನೀಡಿರುವ ಮಾಹಿತಿ, ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಚಾಮರಾಜನಗರ ಇವರು ದಿನಾಂಕ : 04.03.2015 ಮತ್ತು 05.03.2015ರಂದು ಕೊಳ್ಳೇಗಾಲ ತಾಲ್ಲೂಕಿನ ವ್ಯಾಪ್ತಿಯಲ್ಲಿ ಗ್ರಾಮೀಣ ಕುಡಿಯುವ ನೀರು ಯೋಜನೆಗಳ ಕಾಮಗಾರಿಗಳ ತಪಾಸಣೆ ನಡೆಸಿ ಸಲ್ಲಿಸಿರುವ ವರದಿಯಲ್ಲಿನ ವಿವರಗಳನ್ನು ಪರಿಶೀಲಿಸಿ, ಮುಳ್ಳೂರು, ಚಿಲಕವಾಡಿ, ತೇರಂಬಳ್ಳಿ, ಕುಂತೂರು, ಕರಿಯಪ್ಪನದೊಡ್ಡಿ, ಉಪ್ಪಾರದೊಡ್ಡಿ, ಬೆಳತ್ತೂರು ಮತ್ತು ಹಲಗಾಪೂರ ಗ್ರಾಮಗಳಲ್ಲಿನ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳಲ್ಲಿ ಹಲವು ನ್ಯೂನತೆಗಳು ಕಂಡುಬಂದಿದ್ದು, ಮಂಜೂರಾದ ಅಂದಾಜಿನಂತೆ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸದೆ ವಿಳಂಬಿಸಿರುವುದರಿಂದ ಕುಡಿಯುವ ನೀರಿನ ಪೂರೈಕೆಯ ಉದ್ದೇಶವು ವಿಫಲವಾಗಿದ್ದು, ಸರ್ಕಾರದ ಅನುದಾನವು ಸದುಪಯೋಗವಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ, ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೊಳ್ಳೇಗಾಲ ಮತ್ತು ಶ್ರೀ ಹೆಚ್.ಬಿ.ರವಿಕುಮಾರ್, ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಕೊಳ್ಳೇಗಾಲ ಇವರುಗಳು ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ಪೂರ್ಣ ಪ್ರಮಾಣದ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮೇಲೆ ಓದಲಾದ ಸರ್ಕಾರದ ಆದೇಶ ದಿನಾಂಕ : 25.05.2015ರಲ್ಲಿ ಸದರಿಯವರುಗಳನ್ನು ಅವರುಗಳ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು, ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ.

ಸರ್ಕಾರವು ಪ್ರಕರಣವನ್ನು ಪರಿಶೀಲಿಸಿದ್ದು, ಸದರಿಯವರುಗಳನ್ನು ಅಮಾನತ್ತುಗೊಳಿಸಿ 3 ತಿಂಗಳ ಅವಧಿ ಗತಿಸಿರುವುದರಿಂದ, ಸದರಿಯವರುಗಳ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇರಿಸಿ ಇವರುಗಳನ್ನು ಸೇವೆಯಲ್ಲಿ ಪುನರ್ ಸ್ಥಾಪಿಸಿ, ಅವರುಗಳ ಸೇವೆಯನ್ನು ಸದರಿಯವರುಗಳ ಮಾತೃ ಇಲಾಖೆಗೆ ಹಿಂದರುಗಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ : ಗ್ರಾಅಪ 42 ಇಎನ್‌ಕ್ಯೂ 2015, ಬೆಂಗಳೂರು, ದಿನಾಂಕ. 18.09.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮತ್ತು ಶ್ರೀ ಹೆಚ್.ಬಿ.ರವಿಕುಮಾರ್, ಸಹಾಯಕ ಇಂಜಿನಿಯರ್ ಇವರುಗಳ

ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಇವರುಗಳ ಅಮಾನತ್ತು ತೆರವುಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಗೆ ಪುನರ್ ಸ್ಥಾಪಿಸಿ ಅವರುಗಳ ಸೇವೆಯನ್ನು ಮುಂದಿನ ಸ್ಥಳನಿಯುಕ್ತಿಗಾಗಿ ಸದರಿಯವರುಗಳ ಮಾತೃ ಇಲಾಖೆಯಾದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು- (ಲೆಕ್ಕಪತ್ರ 1 &2) / (ಆಡಿಟ್), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ / ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ವೃತ್ತ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ.
8. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಚಾಮರಾಜನಗರ.
9. ಶ್ರೀ ನಿಂಗಶೆಟ್ಟಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೊಳ್ಳೇಗಾಲ
10. ಶ್ರೀ ಹೆಚ್.ಬಿ.ರವಿಕುಮಾರ್, ಹಿಂದಿನ ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಕೊಳ್ಳೇಗಾಲ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಸೇವೆಗಳು-ಎ & ಸಿ.
3. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ / ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
4. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
5. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.

******